ಕರ್ನಾಟಕ ಸರ್ಕಾರ
Government of karnataka

ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in

Phone - 080 26980100
Fax - 080 26422377

ಡಿಎಸ್ಇಆರ್‌ಟಿ DSERT

ಸಂಖ್ಯೆ:E-61249/DSERT/SSKP/TRG/3/2025 ದಿನಾಂಕ:30.06.2025

## ಜ್ಞಾಪನ

ವಿಷಯ: ಯಾವುದೇ ತರಬೇತಿ ಅಥವಾ ಕಾರ್ಯಕ್ರಮಗಳಿಗೆ ಶಿಕ್ಷಕರನ್ನು ಸಂಪನ್ಮೂಲವ್ಯಕ್ತಿಗಳಾಗಿ ನಿಯೋಜಿಸದಿರುವ ಹಾಗೂ ಬಳಸದಿರುವ ಬಗ್ಗೆ.

ಉಲ್ಲೇಖ:1. ಮಾನ್ಯ ಸರ್ಕಾರದ ಪ್ರಧಾನಕಾರ್ಯದರ್ಶಿಗಳ ಸಭಾ ಸೂಚನೆಯಂತೆ

2. ಉಪನಿರ್ದೇಶಕರು ಟಿ.ಇ. ವಿಭಾಗದವರು, ನಿರ್ದೇಶಕರು ಡಿ.ಎಸ್‌ಇ.ಆರ್.ಟಿ ರವರು ನೀಡಿರುವ ಸೂಚನೆಯಂತೆ ಡಯಟ್ ಪ್ರಾಂಶುಪಾಲರ ವಾಟ್ಸಪ್ ಗ್ರೂಪ್‌ನಲ್ಲಿ ನೀಡಿರುವ ಸಂದೇಶ ಮತ್ತು ದಿನಾಂಕ:30.06.2025ನೀಡಿದ ಸೂಚನೆಯಂತೆ.

*******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಶಿಕ್ಷಕರು ತರಬೇತಿ ಅಥವಾ ಕಾರ್ಯಕ್ರಮದಲ್ಲಿ ಸಂಪನ್ಮೂಲವ್ಯಕ್ತಿಗಳಾಗಿ ಭಾಗವಹಿಸುವುದರಿಂದ ಶಾಲೆಯಿಂದ ಹೊರಗುಳಿಯುವದನ್ನು ತಡೆಯುವ ಸಲುವಾಗಿ ಯಾವುದೇ ತರಬೇತಿಗಳಿಗೆ ಅಥವಾ ಕಾರ್ಯಕ್ರಮಗಳಿಗೆ ಶಿಕ್ಷಕರನ್ನು ಸಂಪನ್ಮೂಲವ್ಯಕ್ತಿಗಳಾಗಿ ನಿಯೋಜಿಸದಿರಲು ಅಥವಾ ಬಳಸದಿರಲು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಸೂಚಿಸಿದ್ದಾರೆ. 2025-26ನೇ ಸಾಲಿನ ವಿಭಾಗವಾರು ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಈ ಬಗ್ಗೆ ಮಾನ್ಯರು ಮೌಖಿಕವಾಗಿ ಸೂಚಿಸಿದ್ದು, ಅದರಂತೆ ಕ್ರಮವಹಿಸಲು ಜಿಲ್ಲಾ ಮತ್ತು ಬ್ಲಾಕ್ ಹಂತದ ಅಧಿಕಾರಿಗಳಿಗೆ ಸೂಚಿಸಿದೆ. ಸಂಪನ್ಮೂಲವ್ಯಕ್ತಿಗಳಾಗಿ ಕಡ್ಡಾಯವಾಗಿ ಸಿ.ಆರ್.ಪಿ, ಬಿ.ಆರ್ .ಪಿ, ಇ.ಸಿ.ಒ, ವಿಷಯ ಪರಿವೀಕ್ಷಕರು, ಉಪನ್ಯಾಸಕರು ಹಾಗೂ ಹಿರಿಯ ಉಪನ್ಯಾಸಕರು ಮತ್ತು ಜಿಲ್ಲಾ ಮತ್ತು ಬ್ಲಾಕ್ ಹಂತದ ಶಿಕ್ಷಣಾಧಿಕಾರಿಗಳ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಮಾತ್ರ ಬಳಸಲು ಸೂಚಿಸಿದೆ.

ಜಿಲ್ಲೆಯಿಂದ ಎಂ.ಆರ್.ಪಿ ತರಬೇತಿಗಳಿಗೆ ತಂಡವನ್ನು ನಿಯೋಜಿಸುವಾಗಲು ಈ ಅಂಶಗಳನ್ನು ಗಮನಿಸಿ ಸಿ.ಆರ್.ಪಿ, ಬಿ.ಆರ್.ಪಿ, ಇ.ಸಿ.ಒ, ವಿಷಯ ಪರಿವೀಕ್ಷಕರು, ಉಪನ್ಯಾಸಕರು ಹಾಗೂ ಹಿರಿಯ ಉಪನ್ಯಾಸಕರು ಮತ್ತು ಜಿಲ್ಲಾ ಮತ್ತು ಬ್ಲಾಕ್ ಹಂತದ ಶಿಕ್ಷಣಾಧಿಕಾರಿಗಳ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಮಾತ್ರ ನಿಯೋಜಿಸಲು ಸೂಚಿಸಿದೆ.

ಸಮಾಲೋಚನ ಕಾರ್ಯಗಾರಗಳಂತಹ ಸಂದರ್ಭದಲ್ಲಿ ಶಿಕ್ಷಕರು ಶಿಬಿರಾರ್ಥಿಗಳಾಗಿ ಭಾಗವಹಿಸುತ್ತಿರುವಾಗ ಅವರು ತಮ್ಮ ಅನುಭವಗಳನ್ನು ವ್ಯಕ್ತಪಡಿಸಲು ಅಧಿವೇಶನಗಳಲ್ಲಿ ಅವಕಾಶ ನೀಡಬಹುದು, ಪ್ರಾತ್ಯಕ್ಷಿಕೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಬಹುದು. ಆದರೆ ಸಂಪನ್ಮೂಲವ್ಯಕ್ತಿಯಾಗಿ ಇನ್ನೊಂದು ಕೇಂದ್ರಕ್ಕೆ ಶಿಕ್ಷಕರನ್ನು ಯಾವುದೇ ಕಾರಣಕ್ಕು ನಿಯೋಜಿಸಬಾರದೆಂದು ಸೂಚಿಸಿದೆ.

ಈ ಎಲ್ಲಾ ಅಂಶಗಳನ್ನು ಡಯಟ್‌ನ ಉಪನಿರ್ದೇಶಕರು (ಅಭಿವೃದ್ಧಿ) ರವರ ತಮ್ಮ ಅಧೀನ ಅಧಿಕಾರಿಗಳಿಂದ ಕಡ್ಡಾಯವಾಗಿ ಪಾಲನೆಯಾಗುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು ಹಾಗೂ ಸಂಪನ್ಮೂಲವ್ಯಕ್ತಿಗಳಾಗಿ ಭಾಗವಹಿಸುವ ಅಧಿಕಾರಿ ವೃಂದದವರ ಸಾಮರ್ಥ್ಯವನ್ನು ಹೆಚ್ಚಿಸಲು ಟಿ.ಇ. ಯೋಜನೆಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಿ/ಬಳಸಿಕೊಂಡು ಪರಿಣಾಮಕಾರಿ ಸಂಪನ್ಮೂಲ ಅಭಿವೃದ್ಧಿಗೆ ಶ್ರಮಿಸುವುದು.

30/6/20

ನಿರ್ದೇಶಕರು
ಡಿ.ಎಸ್.ಇ.ಆರ್.ಟಿ
ಬೆಂಗಳೂರು

ಗೆ,

1. ರಾಜ್ಯದ ಎಲ್ಲಾ ಜಿಲ್ಲೆಯ ಉಪನಿರ್ದೇಶಕರು (ಅಭಿವೃದ್ಧಿ ಮತ್ತು ಆಡಳಿತ) ರವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳಿಗೆ ಡಯಟ್‌ಗಳ ಮುಖಾಂತರ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂ.01 ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
5. ಎಲ್ಲಾ ಹಿರಿಯ ಸಹಾಯಕ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ ಬೆಂಗಳೂರು ರವರಿಗೆ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
6. ಕಚೇರಿ ಪ್ರತಿ.